ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ ಸಂಖ್ಯೆ:080-22343980

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-01. ದಿನಾಂಕ:13.09.2017

ಸಂಖ್ಯೆ:ಕಾಶಿಇ/ಶೈವಿ/47/ಸುತ್ತೋಲೆ/2016-17

## ಸುತ್ತೋಲೆ

**ವಿಷಯ:** ನವೆಂಬರ್ 26. ರಂದು "ಸಂವಿಧಾನ ದಿನ" ವನ್ನಾಗಿ ಆಚರಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ:ಇಡಿ/109/ಎಸ್.ಟಿ.ಬಿ/2017. ದಿನಾಂಕ:20.07.2017

******

ಭಾರತ ಸರ್ಕಾರವು ಪ್ರತಿವರ್ಷದ ನವೆಂಬರ್ 26. ರ ದಿನವನ್ನು **"ಸಂವಿಧಾನ ದಿನ"** ಎಂದು ಆಚರಿಸಲು ನಿರ್ಧರಿಸಿದ್ದು. ಅದರನ್ವಯ ಇಲಾಖಾ ವ್ಯಾಪ್ತಿಯ ಎಲ್ಲಾ ಶಿಕ್ಷಣ ಸಂಸ್ಥೆ/ ಸರ್ಕಾರಿ /ಖಾಸಗಿ ಅನುದಾನಿತ ಕಾಲೇಜುಗಳಲ್ಲಿ **"ಸಂವಿಧಾನದ ದಿನ"** ವನ್ನಾಗಿ ಆಯೋಜಿಸಲು ಅಗತ್ಯ ಕ್ರಮವಹಿಸುವಂತೆ ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಸರ್ಕಾರದ ಪತ್ರದ ಸೂಚನೆಯಂತೆ **"ನಾಗರೀಕಜವಾಬ್ದಾರಿಗಳು" ಕುರಿತು ಭಾಷಣ/ಉಪನ್ಯಾಸ. ಮತ್ತು ನಮ್ಮ ಸಮಾಜ ಮತ್ತು ರಾಜಕೀಯ ಕ್ಷೇತ್ರವನ್ನು ರೂಪಿಸುವಲ್ಲಿ ಸಂವಿಧಾನದ ಪಾತ್ರ** ಈ ವಿಷಯಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನವೆಂಬರ್ **26,ರಂದು "ಸಂವಿಧಾನದ ದಿನ"** ವನ್ನಾಗಿ ಆಚರಿಸಲು ಕ್ರಮಕೈಗೊಳ್ಳುವಂತೆ ಸೂಚಿಸುತ್ತಾ. ಕೈಗೊಂಡ ಕ್ರಮದ ಬಗ್ಗೆ ವರದಿಯನ್ನು ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ ಸಲ್ಲಿಸಲು ಸೂಚಿಸಿದೆ.

**(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ. ಪ್ರಾದೇಶಿಕ ಕಛೇರಿ. ಬೆಂಗಳೂರು. ಮೈಸೂರು. ಶಿವಮೊಗ್ಗ. ಮಂಗಳೂರು. ಧಾರವಾಡ. ಗುಲಬರ್ಗಾ-ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಹಾಗೂ ಕ್ರೋಢೀಕೃತ ವರದಿಯನ್ನು ಈ ಕಛೇರಿಗೆ ಕಳುಹಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ. ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ)-ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು. ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ. ಬೆಂಗಳೂರು ಇಲಾಖಾ ವೆಬ್‌ಸೈಟ್ ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ. ಉನ್ನತ ಶಿಕ್ಷಣ ಇಲಾಖೆ. ಬಹುಮಹಡಿ ಕಟ್ಟಡ. ಬೆಂಗಳೂರು-0
2. ಕಛೇರಿ ಪ್ರತಿ